ಮಂಗಳೂರಿನ ಶಾಲೆಗಳ ಸುಧಾರಣೆ

88 (215)

ಶ್ರೀ ಎಸ್.ಯೋಗೀಶ್‌ಭಟ್ (ಮಂಗಳೂರು): ಮಾನ್ಯ ಪ್ರಾಥಮಿಕ, ಪ್ರೌಢ ಹಾಗೂ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಗಳೂರಿನ ಸರ್ಕಾರಿ ಶಾಲೆಗಳ ಕಟ್ಟಡಗಳ ದುರಸ್ತಿ ಕೊರತೆಯಿರುವ ಅಧ್ಯಾಪಕರ ನೇಮಕಾತಿ ಸಿಬ್ಬಂದಿಗಳ ನೇಮಕಾತಿಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು? (ಈ ಬಗ್ಗೆ ಪೂರ್ಣ ವಿವರ ನೀಡುವುದು)

ಆ) ಮಂಗಳೂರಿನ ಶಾಲಾ ಕಟ್ಟಡಗಳ ದುರಸ್ತಿ ಪೂರ್ಣಗೊಳಿಸದೆಯೇ, ಶಾಲಾಭಿವೃದ್ಧಿ ಸಮಿತಿಯ ಹಾಗೂ ಮುಖೋಪಾಧ್ಯಾಯರ ಅನುಮತಿಯಿಲ್ಲದಿದ್ದರೂ ಗುತ್ತಿಗೆದಾರರಿಗೆ ಬಿಲ್ ಪಾವತಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್.ಜಿ.ಗೋವಿಂದೇಗೌಡ (ಮಾನ್ಯ ಪ್ರಾಥಮಿಕ, ಪ್ರೌಢ ಹಾಗೂ ಉನ್ನತ ಶಿಕ್ಷಣ ಸಚಿವರು):

ಅ) 1997-98ನೇ ಸಾಲಿನಲ್ಲಿ ಮಂಗಳೂರಿನ 8 ಸರ್ಕಾರಿ ಪ್ರಾಥಮಿಕ ಶಾಲಾ ದುರಸ್ತಿಗೆ ಕ್ರಮ ಕೈಗೊಂಡಿದೆ. ಈ ಬಗ್ಗೆ ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್‌ನಿಂದ ರೂ. 1.50 ಲಕ್ಷ ಹಣವನ್ನು ದಿನಾಂಕ: 17-1-98ರಂದು ಬಿಡುಗಡೆಯಾಗಿದೆ. ಕಾಮಗಾರಿ ಪ್ರಗತಿಯಲ್ಲಿದೆ, ಹಾಗೂ 3 ಸರ್ಕಾರಿ ಪ್ರೌಢಶಾಲೆಗಳಿಗೆ ಒಟ್ಟು ರೂ.73,000-00ಗಳನ್ನು ಕಟ್ಟಡ ದುರಸ್ತಿಗೆ ಮಂಜೂರಾತಿ ನೀಡಲಾಗಿದೆ.

ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿನ ಶಿಕ್ಷಕರ ಕೊರತೆಯನ್ನು ಜಿಲ್ಲೆಯಲ್ಲಿನ ಶಿಕ್ಷಕರ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಮೂಲಕ ಹೋಗಲಾಡಿಸಲಾಗುತ್ತಿದೆ. ಸದ್ಯ ಮಂಗಳೂರಿನಲ್ಲಿನ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು 1998ರ ನೇಮಕಾತಿಗಾಗಿ ಪ್ರಕಟಿಸಿದ್ದು, ಅದರಂತೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೋಂದಾಯಿಸಿದ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ತರಿಸಿಕೊಂಡು ಜಿಲ್ಲಾ ನೇಮಕಾತಿ ಪ್ರಾಧಿಕಾರಿಗಳಾದ ಉಪ ನಿರ್ದೇಶಕರು ಆಯ್ಕೆ ಪಟ್ಟಿ ತಯಾರಿಸುವ ಕೆಲಸ ನಿರ್ವಹಿಸುತ್ತಿದ್ದಾರೆ. ಆಯ್ಕೆ ಪಟ್ಟಿ ಪ್ರಕಟಿಸಿದ ನಂತರ ನಿಯಮಾನುಸಾರ ನೇಮಕಾತಿ ಮಾಡಲಾಗುವುದು.

ಆ) ದುರಸ್ತಿ ಕಾರ್ಯ ಪೂರ್ಣಗೊಂಡಿರುವುದಿಲ್ಲ. ಗುತ್ತಿಗೆದಾರರಿಗೆ ನೇರವಾಗಿ ಹಣ ಪಾವತಿ ಬಗ್ಗೆ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದಾಗಲೀ, ಶಾಲಾಭಿವೃದ್ಧಿ ಸಮಿತಿ

ಹಾಗೂ ಮುಖ್ಯೋಪಾಧ್ಯಾಯರಿಂದಾಗಲೀ ಮತ್ತು ಸಾರ್ವಜನಿಕರಿಂದಾಗಲೀ ಯಾವುದೇ ದೂರು ಬಂದಿಲ್ಲ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಮಂಗಳೂರಿನ ವೆನ್‌ಲಾಕ್ ಹಾಗೂ ಲೇಡಿ ಘೋಷಣ ಆಸ್ಪತ್ರೆಗಳ ಸುಧಾರಣೆ

89 (217)

ಶ್ರೀ ಎನ್.ಯೋಗೀಶ್ ಭಟ್ (ಮಂಗಳೂರು): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಎ. ಮಂಗಳೂರಿನಲ್ಲಿರುವ ವೆನ್‌ಲಾಕ್ ಹಾಗು ಲೇಡಿ ಘೋಷನ್ ಆಸ್ಪತ್ರೆಗಳಲ್ಲಿ ವೈದ್ಯರು ಸಿಬ್ಬಂದಿಗಳ ನೇಮಕಾತಿಗೆ ಸರ್ಕಾರವು ಕೈಗೊಂಡ ಕ್ರಮಗಳೇನು? ಎಷ್ಟು ಸಮಯದೊಳಗೆ ನೇಮಕಾತಿ ಮಾಡಲಾಗುವುದು?

ಬಿ. ಈ ಆಸ್ಪತ್ರೆಗಳ ಲಿಫ್ಟ್ ಹಾಳಾಗಿರುವುದು ಶವಾಗಾರ ಹಾಳಾಗಿರುವುದು, ಡ್ರೈನೇಜ್ ವ್ಯವಸ್ಥೆ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದಲ್ಲಿ ದುರಸ್ತಿ ಮಾಡಲಾಗುವುದೇ?

ಸಿ. ಸದರಿ ಆಸ್ಪತ್ರೆಗೆ ಸಂದರ್ಶನ ಸಮಿತಿ ನೇಮಕ ಮಾಡದಿರಲು ಕಾರಣಗಳೇನು? ಯಾವಾಗ ಮಾಡಲಾಗುವುದು?

ಡಿ. ಕ್ಲಿನಿಕಲ್ ಸೌಲಭ್ಯ ನೀಡಿದ್ದಕ್ಕೆ ಸದರಿ ಆಸ್ಪತ್ರೆಗೆ ಬರಬೇಕಾಗಿರುವ ಬಾಕಿ ಹಣ ಎಷ್ಟು? ಅದನ್ನು ವಸೂಲು ಮಾಡಿ ಆಸ್ಪತ್ರೆಯ ಸುಧಾರಣೆಗೆ ಬಳಸುವುದೇ?

ಡಾ॥ ಹೆಚ್.ಸಿ.ಮಹದೇವಪ್ಪ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಎ. ಖಾಲಿ ಇರುವ ವೈದ್ಯಾಧಿಕಾರಿಗಳ ಹುದ್ದೆಗಳನ್ನು 1998ರ ಸಾಮಾನ್ಯ ವರ್ಗಾವಣೆ ಸಮಯದಲ್ಲಿ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ವೈದ್ಯೇತರ ಹುದ್ದೆಗಳನ್ನು ಇಲಾಖಾ ನೇಮಕಾತಿ ಸಮಿತಿಯಿಂದ ನೇರ ನೇಮಕಾತಿ ಮಾಡಲು ಅರ್ಜಿಗಳನ್ನು ಕರೆಯಲಾಗಿದ್ದು ಸಂದರ್ಶನ ಪ್ರಕ್ರಿಯೆ ಪ್ರಗತಿಯಲ್ಲಿದೆ. ಶೀಘ್ರದಲ್ಲಿಯೇ ನೇಮಕಾತಿ ಮಾಡಲಾಗುವುದು.

ಬಿ. ಲಿಫ್ಟ್: ಹಲವು ವರ್ಷಗಳಿಂದ ದುರಸ್ತಿಯಲ್ಲಿದ್ದ ಎರಡು ಲಿಫ್ಟ್‌ಗಳಲ್ಲಿ ಒಂದನ್ನು ಈಗಾಗಲೇ ದುರಸ್ತಿಗೊಳಿಸಲಾಗಿದೆ. ಇನ್ನೊಂದರ